# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಅಸಕ್ತ ವ್ಯಕ್ತಿ/ಸಂಸ್ಥೆಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸೂಕ್ತ ಶಿಫಾರಸ್ಸು ಮಾಡಲು ತಾಂತ್ರಿಕ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ನಅಇ 575 ಎಂಎನ್‌ವೈ 2010, ದಿನಾಂಕ 06-08-2010.
2) ಸರ್ಕಾರದ ಆದೇಶ ಸಂಖ್ಯೆ: ನಅಇ 202 ಜಿಇಎಲ್ 2012, ದಿನಾಂಕ 15-06-2012.
3) ಬಿ.ಬಿ.ಎಂ.ಪಿ. ಆಯುಕ್ತರ ಪತ್ರ ಸಂಖ್ಯೆ: ಮುಖ್ಯ/ಘನ/2/08/2012-13, ದಿನಾಂಕ: 06-11-12.
4) ಬಿ.ಬಿ.ಎಂ.ಪಿ. ಆಯುಕ್ತರ ಪತ್ರ ಸಂಖ್ಯೆ: ಮುಖ್ಯ/ಘನ-2/ಪಿ.ಆರ್/08/2012-13, ದಿನಾಂಕ: 21-11-12.
5) ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 04-12-2012ರಂದು ನಡೆದ ಸಭೆ ನಡವಳಿಗಳು
6) ಬಿ.ಬಿ.ಎಂ.ಪಿ. ಆಯುಕ್ತರ ಪತ್ರ ಸಂಖ್ಯೆ: ಅಆ(ಘ.ತ್ಯಾ.ನಿ)/ಪಿ.ಆರ್/523/2012-13, ದಿನಾಂಕ: 04-12-2012.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ 06-08-2012ರ ಆದೇಶದಲ್ಲಿ ರಾಜ್ಯದ ನಗರ ಪ್ರದೇಶಗಳಲ್ಲಿ ಘನತ್ಯಾಜ್ಯ ವಸ್ತುಗಳ ಶೇಖರಣೆ, ಸಾಗಾಣಿಕೆ ಮತ್ತು ವಿಲೇವಾರಿಯಲ್ಲಿ ಎದುರಿಸುತ್ತಿರುವ ತೊಂದರೆಗಳನ್ನು ನಿವಾರಿಸುವ ಸಲುವಾಗಿ ಸಮಗ್ರ ಪರಿಹಾರ ಕಂಡು ಹಿಡಿಯಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ಒಂದು ಅಧಿಕಾರಯುಕ್ತ ಸಮಿತಿಯನ್ನು ರಚಿಸಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ದಿನಾಂಕ 15-06-2012ರ ಆದೇಶದಲ್ಲಿ ಪೌರಾಡಳಿತ ನಿರ್ದೇಶನಾಲಯದ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ವಸ್ತು (ವ್ಯವಸ್ಥಾಪನೆ ಮತ್ತು ನಿರ್ವಹಣೆ) ನಿಯಮ 2000 ಹಾಗೂ ಕರ್ನಾಟಕ ರಾಜ್ಯ ನೀತಿ/ಶಿಫಾರಸ್ಸುಗಳನ್ನು ತಾಂತ್ರಿಕ ಬೆಂಬಲದೊಂದಿಗೆ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಪೌರಾಡಳಿತ ನಿರ್ದೇಶನಾಲಯದ ಆಯುಕ್ತರ ಅಧ್ಯಕ್ಷತೆಯಲ್ಲಿ ತಾಂತ್ರಿಕ ಸಮಿತಿಯನ್ನು ರಚಿಸಲಾಗಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ತ್ಯಾಜ್ಯ ವಿಲೇವಾರಿಯ ಬಗ್ಗೆ ಹಾಗೂ ಈ ಸಂಬಂಧ ರಾಜ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 24739-40/2012 ಕ್ಕೆ ಸಂಬಂಧಿಸಿದಂತೆ ನೀಡಿರುವ ಮಧ್ಯಂತರ ಆದೇಶದಲ್ಲಿ ನೀಡಿರುವ ನಿರ್ದೇಶನಕ್ಕೆ ಸಂಬಂಧಿಸಿದಂತೆ ದಿನಾಂಕ: 04-12-2012ರಂದು ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಪರಿಶೀಲನಾ ಸಭೆಯಲ್ಲಿ ತಾಂತ್ರಿಕ ಸಮಿತಿಯನ್ನು ರಚಿಸಲು ಕೂಡಲೇ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆಯುಕ್ತರು, ಬಿ.ಬಿ.ಎಂ.ಪಿ. ಇವರಿಗೆ ಸೂಚಿಸಲಾಗಿತ್ತು.

ಮೇಲೆ (3), (4) ಮತ್ತು (6)ರಲ್ಲಿ ಓದಲಾದ ಪತ್ರಗಳಲ್ಲಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರು ಪಾಲಿಕೆಯಿಂದ ಒಂದು ಲಕ್ಷದಿಂದ ಹತ್ತು ಲಕ್ಷ ಮೆಟ್ರಿಕ್ ಟನ್ ಸಂಸ್ಕರಿಸದ ಪೌರ ಘನ ತ್ಯಾಜ್ಯ ವಿಲೇವಾರಿಗೆ ಸೂಕ್ತ ತಂತ್ರಜ್ಞಾನಗಳನ್ನು ಪ್ರಸ್ತಾಪಿಸಲು ಆಸಕ್ತ ವ್ಯಕ್ತಿಗಳಿಂದ ಸಲಹೆಗಳನ್ನು ಆಹ್ವಾನಿಸಲಾಗಿ ಈ ಕುರಿತು 37 ಸಂಸ್ಥೆಗಳು ಅರ್ಜಿಗಳನ್ನು ಸಲ್ಲಿಸಿದ್ದು, ಇವರುಗಳ ತಂತ್ರಜ್ಞಾನವನ್ನು ಕೂಲಂಕಷವಾಗಿ ಪರಿಶೀಲಿಸಿ, ಪಾಲಿಕೆಯ ಘನತ್ಯಾಜ್ಯ ನಿರ್ವಹಣೆಯುನ್ನು ಪೂರ್ಣ ಪ್ರಮಾಣದಲ್ಲಿ ಮಾಡಲು ಸೂಕ್ತ ತಂತ್ರಜ್ಞಾನವನ್ನು ಅಳವಡಿಸಬೇಕಾಗಿರುವುದರಿಂದ ಈ ಉದ್ದೇಶಕ್ಕಾಗಿ ಘನತ್ಯಾಜ್ಯ ನಿರ್ವಹಣಾ ತಾಂತ್ರಿಕ ಸಮಿತಿಯನ್ನು ರಚಿಸುವಂತೆ ಸರ್ಕಾರವನ್ನು ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯ ವಸ್ತುಗಳನ್ನು ನಿಯಮಾನುಸಾರ ಹಾಗೂ ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಸೂಕ್ತ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಆಸಕ್ತ ವ್ಯಕ್ತಿ/ಸಂಸ್ಥೆಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸೂಕ್ತ ಶಿಫಾರಸ್ಸುಗಳನ್ನು ನೀಡಲು ಘನತ್ಯಾಜ್ಯ ವಿಲೇವಾರಿಯಲ್ಲಿ ಪರಿಣಿತರಾದ ಅಧಿಕಾರಿ ಹಾಗೂ ತಜ್ಞರನ್ನೊಳಗೊಂಡ ಒಂದು ತಾಂತ್ರಿಕ ಸಮಿತಿಯನ್ನು ರಚಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 791 ಎಂಎನ್‌ವೈ 2012,**
**ಬೆಂಗಳೂರು, ದಿನಾಂಕ 07-12-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಒಂದು ಲಕ್ಷದಿಂದ ಹತ್ತು ಲಕ್ಷ ಮೆಟ್ರಿಕ್ ಟನ್ ಸಂಸ್ಕರಿಸದ ಪೌರ ಘನ ತ್ಯಾಜ್ಯ ವಿಲೇವಾರಿಗೆ ಸೂಕ್ತ ತಂತ್ರಜ್ಞಾನಗಳನ್ನು ಪ್ರಸ್ತಾಪಿಸಲು ಆಸಕ್ತ ವ್ಯಕ್ತಿ/ಸಂಸ್ಥೆಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಅನುವಾಗುವಂತೆ ಈ ಕೆಳಕಂಡ ಅಧಿಕಾರಿ ಹಾಗೂ ತಜ್ಞರನ್ನೊಳಗೊಂಡ ತಾಂತ್ರಿಕ ಸಮಿತಿಯನ್ನು ರಚಿಸಲಾಗಿದೆ.

| ಕ್ರಸಂ | ಹೆಸರು ಮತ್ತು ಪದನಾಮ | ಪದನಾಮ |
|---|---|---|
| 1 | ಶ್ರೀ ಎಂ.ಆರ್.ವೆಂಕಟೇಶ್. ಮುಖ್ಯ ಅಭಿಯಂತರರು,ಬಿಬಿಎಂಪಿ | ಅಧ್ಯಕ್ಷರು |
| 2 | ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |
| 3 | ಶ್ರೀ ಅಶೋಕ ಜೈನ್, ಪ್ರಧಾನ ವ್ಯವಸ್ಥಾಪಕರು, (ಯು.ಎ) ಕರ್ನಾಟಕ ನಗರ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಣಕಾಸು ನಿಗಮ, ಬೆಂಗಳೂರು. | ಸದಸ್ಯರು |
| 4 | ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರಿಂದ ನಾಮ ನಿರ್ದೇಶನಗೊಂಡ ಪ್ರತಿನಿಧಿ | ಸದಸ್ಯರು |
| 5 | ಶ್ರೀ. ಪರಮೇಶ್ವರಯ್ಯ ಆರ್.ಎಲ್. ಡೆಪ್ಯೂಟಿ ಚೀಫ್ (ಯೋಜನೆ) ಡಿಜಿಎಂ ಹುಡ್ಕೊ ಬೆಂಗಳೂರು | ಸದಸ್ಯರು |
| 6 | ಕಾರ್ಯಪಾಲಕ ಅಭಿಯಂತರರು (SWM-II) ಬಿಬಿಎಂಪಿ. | ಸಂಚಾಲಕರು |

ಮೇಲ್ಕಂಡ ತಾಂತ್ರಿಕ ಸಮಿತಿಯ ಕರ್ತವ್ಯ ಮತ್ತು ಪ್ರಕಾರ್ಯಗಳು ಈ ಕೆಳಕಂಡಂತಿರುತ್ತದೆ.

**1) Technology proposed for the project**

(a) Suitability of the waste treatment technologies for treating the municipal solid waste generally encountered in India.
(b) Land requirements for the technology
(c) Plan for monetizing the by-products from waste
(d) Strategy for managing the Technology for Waste Management
- Details on R&D, Patenting, and Licensing of technology etc.
- Equipment manufacturing/sourcing

(e) Any other issue related to use of technology

**2) O&M Plan for the project**

(a) Manpower staffing for the project including details of manpower requirements (skilled and unskilled and plans for sourcing such manpower locally for the project.

**3) Assessment of the key risks perceived by the private entity on the project:-**

(a) Possible risk mitigation mechanisms
(b) Expectations of the private entity from BBMP

**4)** Cost Criteria, Environmental Capability, Time bound execution, History, Strength, Experience in India & Abroad, Financial Capability etc.

The private entities may at their discretion provide any supporting documents which enhances the clarity of the project and technology management strategy.

**5)** ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ತಂತ್ರಜ್ಞಾನವನ್ನು ಅಳವಡಿಸಲು ಆಸಕ್ತ ಅರ್ಜಿದಾರರು/ಸಂಸ್ಥೆಗಳಿಂದ (E.O.I) ಸ್ವೀಕೃತವಾದ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸೂಕ್ತ ಸಲಹೆ/ಶಿಫಾರಸ್ಸುಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಸಲ್ಲಿಸುವುದು.

**6)** ಮುನ್ಸಿಪಲ್ ಘನತ್ಯಾಜ್ಯ ನಿರ್ವಹಣೆಯ ಕ್ಷೇತ್ರದಲ್ಲಿ ಹೊಸ ತಾಂತ್ರಿಕತೆಯ ಬಗ್ಗೆ ಪರಿಶೀಲನೆ ನಡೆಸಿ, ಅದನ್ನು ಆಳವಡಿಸುವ ಬಗ್ಗೆ ಬಿಬಿಎಂಪಿ ಆಯುಕ್ತರಿಗೆ ಸೂಕ್ತ ಶಿಫಾರಸ್ಸು/ ಅನುಮೋದನೆ ನೀಡುವುದು.

7) ಮುನ್ಸಿಪಲ್ ಘನತ್ಯಾಜ್ಯ ನಿರ್ವಹಣೆಯ ಕ್ಷೇತ್ರದಲ್ಲಿ ಹೊಸ ಪರಿಕಲ್ಪನೆಯ ಬಗ್ಗೆ ಆಯುಕ್ತರಿಗೆ ಶಿಫಾರಸ್ಸು ಮಾಡುವುದು.

8) ಮುನ್ಸಿಪಲ್ ಘನತ್ಯಾಜ್ಯ ವಸ್ತು ಸಂಸ್ಕರಣೆ ಮತ್ತು ವಿಲೇವಾರಿಯ ಸಂಬಂಧ ಪ್ರಚಲಿತವಿರುವ ಸಾಂಪ್ರದಾಯಿಕ/ಆಧುನಿಕ ತಂತ್ರಜ್ಞಾನದ ಬಗ್ಗೆ ಬಿ.ಬಿ.ಎಂ.ಪಿ. ಆಯುಕ್ತರಿಗೆ ಕಾಲ ಕಾಲಕ್ಕೆ ಸೂಕ್ತ ಮಾಹಿತಿ ಹಾಗೂ ಮಾರ್ಗದರ್ಶನ ನೀಡುವುದು.

9) ಒಮ್ಮೆ ಆಯುಕ್ತರು ಯೋಜನೆಗಳ ತಾಂತ್ರಿಕ ಕಾರ್ಯಸಾಧ್ಯತೆ ಬಗ್ಗೆ ಅನುಮೋದನೆ ನೀಡಿದ ನಂತರ ಕಾಮಗಾರಿಯನ್ನು ಪ್ರಾರಂಭಿಸಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳನ್ವಯ ಇತರೆ ಪ್ರಕ್ರಿಯೆಗಳನ್ನು ಜರುಗಿಸತಕ್ಕದ್ದು.

10) ಈ ತಾಂತ್ರಿಕ ಸಮಿತಿಯು ಘನ ತ್ಯಾಜ್ಯ ನಿರ್ವಹಣೆಯ ಸಂಸ್ಕರಣಾ ಘಟಕ/ ಕೇಂದ್ರಗಳ ಬಗ್ಗೆ ಆಗಿಂದ್ದಾಗ್ಯೆ ಸ್ವೀಕರಿಸಲಾಗುವ ಇತರೆ ಎಲ್ಲಾ ಪ್ರಸ್ತಾವನೆಗಳ ತಾಂತ್ರಿಕ ಕಾರ್ಯಸಾಧ್ಯತೆಯ ಬಗ್ಗೆ ಪರಿಶೀಲಿಸುವುದು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಚಂದ್ರಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
5. ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಹುಡ್ಕೋ, ಹುಡ್ಕೋ ಭವನ, ಇಂಡಿಯಾ ಹ್ಯಾಬಿಟೇಟ್ ಸೆಂಟರ್, ಲೋದಿ ರೋಡ್, ನವದೆಹಲಿ-110003
6. ಎಲ್ಲಾ ಸದಸ್ಯರುಗಳಿಗೆ - ಬಿ.ಬಿ.ಎಂ.ಪಿ., ಆಯುಕ್ತರ ಮುಖಾಂತರ.
7. ವಿಶೇಷ ಆಯುಕ್ತರು (ಯೋಜನೆ), ಬಿ.ಬಿ.ಎಂ.ಪಿ ಬೆಂಗಳೂರು.
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು.
9. ಅಧ್ಯಕ್ಷರು/ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಣಕಾಸು ನಿಗಮ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ ಹಾಗೂ ಜಂಟಿ ಕಾರ್ಯದರ್ಶಿಗಳ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
11. ಶಾಖಾ/ಹೆಚ್ಚುವರಿ ಪ್ರತಿ/ಇಲಾಖೆಯ ಅಂತರಜಾಲ ತಾಣ. - urgent